ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಒಂದು ಒಳರೋಗಿ ಕಡತವನ್ನು ನಿಪಿ-10 ಎಂದು, ಹೊರ ರೋಗಿ ಕಡತವನ್ನು ನಿಪಿ-11 ಎಂದು, 2 ಎಕ್ಸರೇ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-12 ಮತ್ತು ನಿಪಿ-13 ಎಂದು ಗುರುತಿಸಲಾಯಿತು,

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ಅರ್ಜಿದಾರರು ಅಪಘಾತದ ನಂತರ ನಮ್ಮ ಆಸ್ಪತ್ರೆಯಲ್ಲಿ ದಾಖಲಾಗಿರುತ್ತಾರೆ. ಎಂ.ಎಲ್.ಸಿ ಮಾಡಲಾಗಿದೆ. ಅರ್ಜಿದಾರರ ಕಡೆಯವರೇ ನನಗೆ ಮಾಹಿತಿ ನೀಡಿರುತ್ತಾರೆ ಎಂದರೆ ಸರಿ. ಅಪಘಾತವಾದ ನಂತರ ಅರ್ಜಿದಾರರಿಗೆ ನಾನೇ ಶಸ್ತ್ರ ಚಿಕಿತ್ಸೆ ಮಾಡಿರುತ್ತೇನೆ ಎಂದರೆ ಸರಿ. ಮೂಳೆ ಮುರಿತವಾಗಿಲ್ಲ ಆದರೆ ಲಿಗಮೆಂಟೇರ್ ಆಗಿರುತ್ತದೆ. ಲಿಗಮೆಂಟೇರ್ ಅನ್ನು ಪುನರ್ ನಿರ್ಮಾಣ ಮಾಡಲಾಗಿರುತ್ತದೆ ಎಂದರೆ ಸರಿ. ಪುನರ್ ನಿರ್ಮಾಣ ಮಾಡಲಾಗಿರುವುದು ಲಿಗಮೆಂಟೇರ್ ಮತ್ತು ವೇಟ್ ಬೇರಿಂಗೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಇತ್ತೀಚಿನ ಎಕ್ಸರೇ ಪ್ರಕಾರ ಲಿಗಮೆಂಟೇರ್ ಸಂಪೂರ್ಣ ಮುಖವಾಗಿ ಗುಣಮುಖವಾಗಿರುತ್ತದೆ ಎಂದರೆ ಸರಿಯಲ್ಲ. ಇಂಪ್ಲಾಂಟ್ ಮಾತ್ರ ಕಾಣುತ್ತಿದೆ ಎಂದು ನುಡಿಯುತ್ತಾರೆ. ಅರ್ಜಿದಾರರಿಗೆ ಡೆಸಿಲಿಟಿಟ್ ಅಸೆಸ್

ಮೆಂಟ್ ಮಾಡುವ ಸಂದರ್ಭದಲ್ಲಿ ಅವರಿಗೆ ಯಾವುದೇ ಸೋಂಕು ಉಂಟಾಗಿರಲಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರ್ಟಿಕ್ಯೂಲ್ ಲಿಂಬ್ ಗೆ 7-8 ಶೇಕಡ ಅಂಗ ನ್ಯೂನ್ಯತೆ ಬರುತ್ತದೆ ಸಂಪೂರ್ಣ ದೇಹಕ್ಕೆ 2-3 ಶೇಕಡ ಅಂಗ ನ್ಯೂನ್ಯತೆ ಬರುತ್ತದೆ ಎಂದರೆ ಸರಿಯಲ್ಲ. ಸ್ಟೇಬಿಲಿಟಿಕಂಪೋನೆಂಟ್ ಗೆ ನೀಡಿರುವ ಅಂಗ ನ್ಯೂನ್ಯತೆ ಹೆಚ್ಚಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಹೆಚ್ಚಿನ ಪರಿಹಾರ ಸಿಗಲಿ ಎಂದು ಹೆಚ್ಚಿನ ಅಂಗ ನ್ಯೂನ್ಯತೆಯನ್ನು ಬರೆದುಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು